**ಕರ್ನಾಟಕ ಸರ್ಕಾರ**
**(ಪಿ.ಆರ್.ಪಿ.67)**

| |
|---|
| **ಹೇಳಿಕೆ ಹಾಳೆ** |
| **(ಆರ್.ಪಿ.ಸಂಖ್ಯೆ 57)** |
| **ನಮೂನೆ ಸಂಖ್ಯೆ 4** |

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರ ನ್ಯಾಯಾಲಯ, ಹಾಸನ**
**ಸೆಷನ್ಸ್ ಕೇಸ್ ನಂಬರ್ : 250/2022**
**ಫ್ರಾಸಾ- 14 ಚಾಸಾ- 15**

ಸಾಕ್ಷಿದಾರರ ಹೆಸರುಃ : ದಿಲೀಪ ಎಸ್

ತಂದೆಯ ಹೆಸರುಃ : ಶ್ರೀನಿವಾಸ

ವಯಸ್ಸುಃ : 38 ವರ್ಷ

ಉದ್ಯೋಗಃ : ಚಾಲಕ

ವಾಸ : ರಾಮನಾಥಪುರ (ಹಾಲಿ ವಾಸ ಬಿಟ್ಟಗೋಡನಹಳ್ಳಿ)

**ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಿದ ದಿನಾಂಕ:08-04-2026:**

**ಮುಖ್ಯ ವಿಚಾರಣೆಃ ಸರ್ಕಾರದ ಪರವಾಗಿ ಮಾನ್ಯ ಅಭಿಯೋಜಕರಿಂದಃ**

ನಾನು 2022 ರಲ್ಲಿ ಅಗಿಲೆ ರಂಗಣ್ಣನವರ ಬಳಿ ಟ್ರ್ಯಾಕ್ಟರ್ ಚಾಲಕನಾಗಿ ಕೆಲಸ ಮಾಡಿಕೊಂಡಿದ್ದೆನು. ಅವರು ಸಿವಿಲ್ ಕಾಂಟ್ರ್ಯಾಕ್ಟರ್. 2022 ರಲ್ಲಿ ಅವರು ಮಂಡಿಗನಹಳ್ಳಿಯಲ್ಲಿ ಕೆಲಸ ಮಾಡಿಸುತ್ತಿದ್ದರು. ಆಗ ನಾನು ಬಸವೇಗೌಡ ಎಂಬುವವರ ಮನೆಯಿಂದ ನೀರು ತೆಗೆದುಕೊಂಡು ಹೋಗುತ್ತಿದ್ದೆನು. ಅಲ್ಲಿ ಕೂಗುವ ಶಬ್ದ ಕೇಳಿಸಿತು. ಅಲ್ಲಿಗೆ ಹೋದಾಗ ಬಸವೇಗೌಡ, ಮಂಜುನಾಥ ಅವರ ಅಮ್ಮ ಎಲ್ಲರೂ ಬಾಗಿಲು ತಟ್ಟುತ್ತಿದ್ದರು. ನಂತರ ಕಿಟಕಿಯ ಕಡೆ ಬಂದು ನೋಡಿದಾಗ ದೀಪು ಕಿಟಕಿಗೆ ನೇಣುಹಾಕಿಕೊಂಡಿದ್ದರು. ಅಲ್ಲಿಂದ ಇಳಿಸಿ ಮಂಜುನಾಥ ಹಾಗೂ ಅವರ ತಂದೆ ತಾಯಿ ಅವರನ್ನು ಆಸ್ಪತ್ರೆಗೆ ತೆಗೆದುಕೊಂಡು ಹೋದರು. ಯಾವ ಕಾರಣಕ್ಕೆ ಆಕೆ ನೇಣುಹಾಕಿಕೊಂಡದ್ದೆಂದು ಗೊತ್ತಾಗಲಿಲ್ಲ. ನಾನು ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ. ಮಂಜುನಾಥ ದೀಪು ರವರ ಗಂಡ, ಅವರು ನ್ಯಾಯಾಲಯದ ಮುಂದಿರುವ ಆರೋಪಿತರು.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿದಾರರನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ, ಕಡತವನ್ನು ಪರಿಶೀಲಿಸಲಾಗಿ ಸಾಕ್ಷಿಯು ಹೇಳಿಕೆಗೆ ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿಯುವುದು ಕಂಡುಬರುತ್ತದೆ, ಆದ್ದರಿಂದ ಮಾನ್ಯ ಅಭಿಯೋಜಕರ ಕೋರಿಕೆಯನ್ನು ಮನ್ನಿಸಿ ಸಾಕ್ಷಿಯನ್ನು **ಭಾಗಶಃ** ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ, ಪಾಟೀಸವಾಲಿಗೆ ಒಳಪಡಿಸಲು ಅನುಮತಿ ನೀಡಲಾಗಿದೆ)

**<u>ಪಾಟೀಸವಾಲುಃ ಸರ್ಕಾರದ ಪರ ಮಾನ್ಯ ಅಭಿಯೋಜಕರಿಂದಃ</u>**

ಆರೋಪಿತರು ಮೃತಳಿಗೆ ಹಿಂಸೆ ಕೊಡುತ್ತಿದ್ದ ಹಿಂಸೆಯನುಜ್ಞ ಮತ್ತು ಕಿರುಕುಳವನ್ನು ತಾಳಲಾರದೆ ಆಕೆ ನೇಣುಹಾಕಿಕೊಂಡದ್ದೆಂದು ನನಗೆ ತಿಳಿಯಿತೆಂದರೆ ಸರಿಯಲ್ಲ. ಈ ಬಗ್ಗೆ ಈಗ ಓದಿ ಹೇಳಿದಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಓದಿ ಹೇಳಿದ ಸದರಿ ಹೇಳಿಕೆಯ ಭಾಗವನ್ನು ನಿಪಿ-15 ಎಂದು ಗುರುತಿಸಲಾಯಿತು. ಕೇಸಿನ ವಿಷಯ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ</u>**

ಇಲ್ಲವೆಂದು ಹೇಳುತ್ತಾರೆ.

**<u>ಮರು ವಿಚಾರಣೆಃ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ.ಸ.ಇದೆ.**

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,**

**ಹಾಸನ.**